# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 05-02-2022. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ (ಹಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಬಿ.ಎಂ.ಟಿ.ಸಿ. ಬಸ್ ನಿಲ್ದಾಣದಿಂದ ಮೆಜೆಸ್ಟಿಕ್ ಮೆಜೆಸ್ಟಿಕ್ ಮತ್ತು ಮಾರ್ಕೆಟ್‌ಗೆ ಪ್ರತ್ಯೇಕವಾಗಿ 10 ಬಸ್‌ಗಳನ್ನು ಬಿಡುವಂತೆ ಸಭೆಯಲ್ಲಿ ಅ.ಬ ಶಿವಕುಮಾರ್ ರವರು ಕೋರಿದರು.

2. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಯಲಹಂಕ ಕೆರೆಯ ಆವರಣದಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸಿಕೊಡಬೇಕೆಂದು ಸಭೆಯಲ್ಲಿ ಅ.ಬ ಶಿವಕುಮಾರ್ ಸಭೆಯಲ್ಲಿ ಕೋರಿದರು.

3. ವೆಂಕಟಾಲ ಅಂಗನವಾಡಿ ಕೇಂದ್ರದಲ್ಲಿ ಬಾತ್ ರೂಂ ಅನ್ನು ಸರಿಪಡಿಸಿಕೊಡುವಂತೆ ಸಭೆಯಲ್ಲಿ ಶ್ರೀಮತಿ. ಶೋಭರವರು ನೋಡೆಲ್ ಅಧಿಕಾರಿಗಳ ಹತ್ತಿರ ಮನವಿ ಸಲ್ಲಿಸಿದರು.

4. ವೆಂಕಟಾಲ ಜನತಾ ಕಾಲೋನಿ ಎಲ್.ಇ.ಡಿ ಲೈಟ್ ಹಾಳಾಗಿದ್ದು, ಸರಿಪಡಿಸಿಕೊಡುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳಿಗೆ ಕೋರಿದರು.

5. ಮದುರ ಮೀಲನ ಮುಂಭಾಗದಲ್ಲಿ ಇಟ್ಟಿರುವ ನರಸರಿ ಜಾಗದ ಬಗ್ಗೆ ಪರಿಶೀಲನೆ ಮಾಡುವಂತೆ ಸಂಬಂಧಿಸಿದ ಕಂದಾಯ ಪರಿವೀಕ್ಷಕರಾದ ಶಿವಕುಮಾರ್ ರವರಿಗೆ ಸೂಚನೆ ನೀಡಿದರು.

6. ಸರ್ಕಾರಿ ಆಸ್ಪತ್ರೆ ರಸ್ತೆಯಲ್ಲಿ ಬೀಧಿ ದೀಪಗಳ ನಿರ್ವಹಣೆ ಮಾಡುತ್ತಿಲ್ಲವೆಂದು ಹಾಗೂ ಟೈಮರ್‌ಗಳನ್ನು ಅಳವಡಿಸುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಕೋರಿದರು.

P.T.O

7. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

8. ಕೆಂಪೇಗೌಡ ವಾರ್ಡ್ ನಂ –01ರ ವ್ಯಾಪ್ತಿಯಲ್ಲಿರುವ ಮಾರುತಿನಗರ 1ನೇ ಮುಖ್ಯರಸ್ತೆಯಲ್ಲಿ ರಸ್ತೆಯಲ್ಲಿ ಪಾದಚಾರಿ ಮಾರ್ಗದಲ್ಲಿ ಇಟ್ಟಿರುವ ಅಂಗಡಿ ಮುಂಗಟ್ಟುಗಳನ್ನು ತೆಗೆದು ಪಾದಚಾರಿ ಮಾರ್ಗದಲ್ಲಿ ಸಾರ್ವಜನಿಕರು ಸುಗಮವಾಗಿ ಒಡಾಡುವಂತೆ ಮಾಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ಸಂಭಂದಿಸಿದ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

9. ಯಲಹಂಕ 401 ಬಸ್ ಸ್ಟಾಪ್ ಹತ್ತಿರ ನಿರಾಶ್ರಿತರ ತಂಗುದಾಣ ನಿರ್ಮಾಣ ಮಾಡಲು ಅನುಮೋದನೆ ದೊರೆತಿದ್ದು, ಪ್ರಗತಿಯಲ್ಲಿರುವುದಾಗಿ ಸಭೆಯಲ್ಲಿ ಸಹಾಯಕ ಅಬಿಯಂತರರು ನೊಡೆಲ್ ಅಧಿಕಾರಿಗಳಿಗೆ ತಿಳಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.